## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಸದಸ್ಯರ ಹೆಸರು | ಶ್ರೀ ಶಾಂತರಾಮ ಬುಡ್ನ ಸಿದ್ದಿ<br>(ನಾಮ ನಿರ್ದೇಶನ ಹೊಂದಿದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 572 (653) |
| ಉತ್ತರಿಸಬೇಕಾದ ದಿನಾಂಕ | 20.02.2024 |
| ಉತ್ತರಿಸಬೇಕಾದವರು | ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 1 ವರ್ಷದಲ್ಲಿ ನಗರ ಪ್ರದೇಶದ ಕೊಳಗೇರಿಗಳಿಗೆ ಕುಡಿಯುವ ನೀರು ಸೌಲಭ್ಯ ಒದಗಿಸಲು ಕೈಗೊಂಡ ಕ್ರಮಗಳೇನು? | ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ಕಳೆದ ಒಂದು ವರ್ಷದಲ್ಲಿ ಅಮೃತ್ 2.0 ಯೋಜನೆ ಅಡಿಯಲ್ಲಿ 219 ಸ್ಥಳೀಯ ಸಂಸ್ಥೆಗಳಲ್ಲಿ ಕುಡಿಯುವ ನೀರು ಸರಬರಾಜು ಯೋಜನೆಗಳನ್ನು ಕೈಗೊಳ್ಳಲಾಗುತ್ತಿದ್ದು, ಸದರಿ ಪಟ್ಟಣಗಳಲ್ಲಿರುವ ಕೊಳಗೇರಿ ಪ್ರದೇಶಗಳಲ್ಲಿನ 84815 ಮನೆಗಳಿಗೆ ಕುಡಿಯುವ ನೀರು ಸಂಪರ್ಕ ಒದಗಿಸಲು ಉದ್ದೇಶಿಸಲಾಗಿದೆ. |
| ಆ) | ಕಳೆದ 1 ವರ್ಷದಲ್ಲಿ ನಗರ ಪ್ರದೇಶದ ಕೊಳಗೇರಿಗಳಲ್ಲಿನ ಮನೆಗಳಿಗೆ ನಲ್ಲಿ ಮೂಲಕ ಕುಡಿಯುವ ನೀರು ಸರಬರಾಜು ಮಾಡಲು ಎಷ್ಟು ಮೊತ್ತವನ್ನು ವೆಚ್ಚ ಮಾಡಲಾಗಿದೆ. (ಜಿಲ್ಲಾವಾರು ಮಾಹಿತಿ ನೀಡುವುದು) | ಕಳೆದ 1 ವರ್ಷದಲ್ಲಿ ನಗರ ಪ್ರದೇಶದ ಕೊಳಗೇರಿಗಳಲ್ಲಿನ ಮನೆಗಳಿಗೆ ನಲ್ಲಿ ಮೂಲಕ ಕುಡಿಯುವ ನೀರು ಸರಬರಾಜು ಮಾಡಲು ಮಂಡಳಿ ವತಿಯಿಂದ ಯಾವುದೇ ವೆಚ್ಚವನ್ನು ಮಾಡಲಾಗಿರುವುದಿಲ್ಲ.<br><br>ಚಿತ್ರದುರ್ಗ ನಗರಸಭೆ ವತಿಯಿಂದ ನಿರ್ವಹಿಸುತ್ತಿರುವ ಕವಾಡಿಗರಹಟ್ಟಿ ಪ್ರದೇಶದಲ್ಲಿ ಕಲುಷಿತ ಕುಡಿಯುವ ನೀರಿನ ಸೇವನೆಯಿಂದ ಮರಣ ಮತ್ತು ಅಸ್ವಸ್ಥ ಪ್ರಕರಣಗಳು ವರದಿಯಾಗಿರುವ ಹಿನ್ನೆಲೆಯಲ್ಲಿ ಸದರಿ ಪ್ರದೇಶಕ್ಕೆ ಶುದ್ಧ ನೀರು ಸರಬರಾಜು ವ್ಯವಸ್ಥೆ ಕಲ್ಪಿಸಲು ಎಸ್.ಎಫ್.ಸಿ. ವಿಶೇಷ ಅನುದಾನದಡಿ ರೂ.307.42 ಲಕ್ಷಗಳಿಗೆ ದಿನಾಂಕ:03.11.2023ರಲ್ಲಿ ಅನುಮೋದನೆ ನೀಡಲಾಗಿದ್ದು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ರ ಕಲಂ 4ಜಿ ರಡಿ ವಿನಾಯಿತಿಯನ್ನೂ ಸಹ ನೀಡಿದ್ದು ಕಾಮಗಾರಿಯು ಪ್ರಗತಿಯಲ್ಲಿರುತ್ತದೆ. |

| | | |
|---|---|---|
| ಇ) | ಅಶುದ್ಧ ನೀರನ್ನು ಕೊಳಗೇರಿಯಲ್ಲಿನ ನಿವಾಸಿಗಳು ಬಳಸುತ್ತಿರುವುದರಿಂದ ಅವರ ಆರೋಗ್ಯದ ಮೇಲಾಗುವ ಪರಿಣಾಮಗಳಿಗೆ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗಿದೆ; ಈ ಕುರಿತು ಸರ್ಕಾರದ ನಿಲುವೇನು? | ಪ್ರಸ್ತುತ ಮಂಡಳಿ ವತಿಯಿಂದ ರಾಜ್ಯದ 7 ನಗರ ಪ್ರದೇಶಗಳಾದ 1)ಕುಶಾಲನಗರ 2)ಮಂಡ್ಯ 3)ರಾಬರ್ಟ್ ಸನ್ ಪೇಟೆ 4)ರಾಮನಗರ 5)ಚನ್ನಪಟ್ಟಣ 6)ಶಿವಮೊಗ್ಗ 7)ವಿಜಯಪುರದಲ್ಲಿ ಗ್ರಾಹಕರ ಹಂತದವರೆಗೆ ಕುಡಿಯುವ ನೀರಿನ ನಿರ್ವಹಣೆಯನ್ನು ನಿರ್ವಹಿಸಲಾಗುತ್ತಿದ್ದು, ಸದರಿ ಪಟ್ಟಣಗಳ ಕೊಳಗೇರಿಯಲ್ಲಿ ಅಶುದ್ಧ ಕುಡಿಯುವ ನೀರಿನ ಸರಬರಾಜು ಕುರಿತು ಯಾವುದೇ ದೂರುಗಳು ಸ್ವೀಕೃತಗೊಂಡಿರುವುದಿಲ್ಲವಾದ್ದರಿಂದ ಈ ಬಗ್ಗೆ ಯಾರನ್ನೂ ಸಹ ಹೊಣೆಗಾರರನ್ನಾಗಿ ಮಾಡುವ ಪ್ರಶ್ನೆ ಉದ್ಭವಿಸುವುದಿಲ್ಲ. |

ಸಂಖ್ಯೆ : ನಅಇ 13 ಯುಎಂಎಸ್ 2024

21/02/2024

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಮತ್ತು
ನಗರ ಯೋಜನೆ ಸಚಿವರು